**Bangalore**
**Regional News**
**25.05.2025 / 2.30 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಮಕ್ಕಳಿಗೆ ಸಕ್ಕರೆ ಸೇವನೆ ಬಗ್ಗೆ ಜಾಗೃತಿ ಮೂಡಿಸುವಂತೆ ಮನ್ ಕೀ ಬಾತ್‌ನಲ್ಲಿ ಪ್ರಧಾನಿ ಮೋದಿ ಕರೆ

೨. ನೀತಿ ಆಯೋಗದ ಸಭೆಗೆ ಮುಖ್ಯಮಂತ್ರಿ ಗೈರು - ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅಸಮಾಧಾನ

೩. ರಾಜ್ಯ ಪ್ರವೇಶಿಸಿದ ಮುಂಗಾರು - ಕರಾವಳಿ ಜಿಲ್ಲೆಗಳಲ್ಲಿ ಧಾರಾಕಾರ ಮಳೆ - ರೆಡ್ ಅಲರ್ಟ್ ಘೋಷಣೆ

೪. ಇಂದಿನಿಂದ ವಿಧಾನಸೌಧ ವೀಕ್ಷಣೆಗೆ ಪ್ರವಾಸೋದ್ಯಮ ಇಲಾಖೆಯಿಂದ ಅಧಿಕೃತ ಅವಕಾಶ

**<><><><>**

ಭಾರತ ದೇಶ ಇಂದು ಭಯೋತ್ಪಾದನೆಯ ವಿರುದ್ಧ ಒಗ್ಗೂಡಿ ನಿಂತಿದ್ದು, ಭಯೋತ್ಪಾದನೆಯನ್ನು ಕೊನೆಗೊಳಿಸಲೇಬೇಕು ಎಂಬುದು ಪ್ರತಿಯೊಬ್ಬ ಭಾರತೀಯನ ಸಂಕಲ್ಪವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ತಮ್ಮ ಮನದಾಳದ ಮಾತನ್ನು ಹಂಚಿಕೊಂಡಿದ್ದಾರೆ. ಮನ್ ಕಿ ಬಾತ್ ೧೨೨ನೇ ಆವೃತ್ತಿಯಲ್ಲಿಂದು ಪ್ರಧಾನಿ 'ಆಪರೇಷನ್ ಸಿಂಧೂರ್' ಸಮಯದಲ್ಲಿ ನಮ್ಮ ಸೇನಾ ಪಡೆಗಳು ಪ್ರದರ್ಶಿಸಿದ ಶೌರ್ಯ ಪ್ರತಿಯೊಬ್ಬ ಹಿಂದೂಸ್ತಾನಿಯನ್ನೂ ಹೆಮ್ಮೆಪಡುವಂತೆ ಮಾಡಿದೆ. ಗಡಿಯಾಚೆಗಿನ ಭಯೋತ್ಪಾದಕ ಅಡಗುತಾಣಗಳನ್ನು ನಮ್ಮ ಪಡೆಗಳು ನಿಖರತೆಯಿಂದ ಕರಾರುವಾಕ್ಕಾಗಿ ನಾಶಪಡಿಸಿರುವುದು ಅದ್ಭುತವಾಗಿದೆ. 'ಆಪರೇಷನ್ ಸಿಂಧೂರ್' ಪ್ರಪಂಚದಾದ್ಯಂತ ಭಯೋತ್ಪಾದನೆಯ ವಿರುದ್ಧದ ಹೋರಾಟಕ್ಕೆ ಹೊಸ ಭರವಸೆ ಮತ್ತು ಉತ್ಸಾಹ ತುಂಬಿದೆ ಎಂದು ತಿಳಿಸಿದ್ದಾರೆ. 'ಆಪರೇಷನ್ ಸಿಂಧೂರ್' ಕೇವಲ ಮಿಲಿಟರಿ ಕಾರ್ಯಾಚರಣೆಯಲ್ಲ, ಇದು ನಮ್ಮ ದೃಢನಿಶ್ಚಯ, ಧೈರ್ಯ ಮತ್ತು ಬದಲಾಗುತ್ತಿರುವ ಭಾರತದ ಚಿತ್ರಣವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ನಮ್ಮ ಯೋಧರು ಪಾಕ್ ಭಯೋತ್ಪಾದಕ ನೆಲೆಗಳನ್ನು ನಾಶಪಡಿಸಿದ್ದು ಅವರ ಅದಮ್ಯ ಸಾಹಸವಾಗಿತ್ತು. ಅದರಲ್ಲಿ ಭಾರತದಲ್ಲಿ ತಯಾರಿಸಿದ ಶಸ್ತ್ರಾಸ್ತ್ರಗಳು, ಉಪಕರಣಗಳು ಮತ್ತು ತಂತ್ರಜ್ಞಾನದ ಶಕ್ತಿಯೂ ಸೇರಿತ್ತು. ಈ ಅಭಿಯಾನದ ನಂತರ, ದೇಶಾದ್ಯಂತ 'ವೋಕಲ್ ಫಾರ್ ಲೋಕಲ್ ಕುರಿತು ಹೊಸ ಆಶಾಕಿರಣ ಮೂಡಿಸಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಈಗ ಕೆಲವು ಶಾಲೆಗಳಲ್ಲಿ ಶುಗರ್

ಬೋರ್ಡ್ ಹಾಕಲಾಗುತ್ತಿದೆ. ಇದರ ಉದ್ದೇಶ ಮಕ್ಕಳಿಗೆ ಸಕ್ಕರೆ ಸೇವನೆ ಬಗ್ಗೆ ಜಾಗೃತಿ ಮೂಡಿಸುವುದು. ಬಾಲ್ಯದಿಂದಲೇ ಮಕ್ಕಳು ಆರೋಗ್ಯಕರ ಜೀವನಶೈಲಿಯ ಅಭ್ಯಾಸ ಮಾಡಿಕೊಳ್ಳುವಂತೆ ಪ್ರಧಾನಿ ಕರೆ ನೀಡಿದ್ದಾರೆ. ಅಂತಾರಾಷ್ಟ್ರೀಯ ಯೋಗದಿನ'ಕ್ಕೆ ಕೆಲವೇ ದಿನ ಬಾಕಿಯಿದ್ದು ಯೋಗಾಭ್ಯಾಸದಿಂದ ದೂರವಿದ್ದರೆ ಕೂಡಲೇ ಯೋಗಾಭ್ಯಾಸ ಆರಂಭಿಸಿ ಎಂದು ಕರೆ ನೀಡಿದ್ದಾರೆ. ಇತ್ತೀಚೆಗೆ ಬಿಹಾರದಲ್ಲಿ ನಡೆದ ಖೇಲೋ ಇಂಡಿಯಾ ಕ್ರೀಡಾಕೂಟವು ದೊಡ್ಡ ಯಶಸ್ಸನ್ನು ಕಂಡಿದೆ ಎಂದು ಹೇಳಿದ್ದಾರೆ. ಸ್ವಚ್ಛ ಭಾರತ ಅಭಿಯಾನ ಈಗ ಕೇವಲ ನಗರಗಳ ಮಟ್ಟಕ್ಕೆ ಸೀಮಿತವಿಲ್ಲ, ಇದು ಪರ್ವತ ಶಿಖರಗಳವರೆಗೆ ವಿಸ್ತರಿಸಿದೆ. ಕಾಗದದ ತ್ಯಾಜ್ಯ ನಿರ್ವಹಣೆ ಬಗ್ಗೆಯೂ ಮಾತನಾಡಿದ ಪ್ರಧಾನಿ, ಇದು ಇಂದಿನ ಮುಖ್ಯ ಸಮಸ್ಯೆಯಾಗಿದೆ ಎಂದು ಹೇಳಿದರು. ದೇಶದ ತ್ಯಾಜ್ಯ ವಿಲೇವಾರಿ ಸ್ಥಳಗಳಲ್ಲಿ ಬಹುಪಾಲು ಕಾಗದದ ತ್ಯಾಜ್ಯವಿದೆ. ಒಂದು ಟನ್ ಕಾಗದವನ್ನು ಮರುಬಳಕೆ ಮಾಡುವುದರಿಂದ ೧೭ ಮರಗಳು ಮತ್ತು ಸಾವಿರಾರು ಲೀಟರ್ ನೀರನ್ನು ಉಳಿಸಬಹುದು ಎಂದು ತಿಳಿಸಿದ್ದಾರೆ. ಮೇ ೨೦ ಅನ್ನು 'ವಿಶ್ವ ಜೇನುನೊಣ ದಿನ' ಎಂದು ಆಚರಿಸಲಾಯಿತು, ಈ ದಿನ ಜೇನುತುಪ್ಪವು ಕೇವಲ ಸಿಹಿ ಮಾತ್ರವಲ್ಲ, ಆರೋಗ್ಯ, ಸ್ವ-ಉದ್ಯೋಗ ಮತ್ತು ಸ್ವಾವಲಂಬನೆಯ ಉದಾಹರಣೆಯಾಗಿದೆ. ರೈತರು, ಮಹಿಳಾ ಉದ್ಯಮಿಗಳಿಂದ ಜೇನುತುಪ್ಪವನ್ನು ಖರೀದಿಸುವಂತೆ ಕರೆ ನೀಡಿದ್ದಾರೆ. ಕಳೆದ ಕೇವಲ ಐದು ವರ್ಷಗಳಲ್ಲಿ, ಗುಜರಾತ್ ನ ಗಿರ್ ನಲ್ಲಿ ಸಿಂಹಗಳ ಸಂಖ್ಯೆ ೬೭೪ ರಿಂದ ೮೯೧ಕ್ಕೆ ಏರಿಕೆಯಾಗಿದೆ. ಈ ಪ್ರಾಣಿಗಳ ಗಣತಿ ಬಹಳ ಸವಾಲಿನದ್ದಾಗಿತ್ತು ಎಂದು ಅವರು ಹೇಳಿದ್ದಾರೆ.

<><><>

ನೀತಿ ಆಯೋಗದ ಸಭೆಗೆ ರಾಜ್ಯ ಸರ್ಕಾರವು ಗೈರಾಗುವ ಮುಖಾಂತರ ರಾಜ್ಯದ ಜನತೆಗೆ ಅನ್ಯಾಯ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಆರೋಪಿಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನ ಮಂತ್ರಿಗಳು ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳನ್ನು ನೀತಿ ಆಯೋಗ ಸಭೆಗೆ ಆಹ್ವಾನಿಸಿದ್ದರು, ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ಕೂಡ ಭಾಗವಹಿಸಿದ್ದರು, ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೈರು ಹಾಜರಾಗಿರುವುದರಿಂದ ರಾಜ್ಯದ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಲಿದೆ ಎಂದು ಹೇಳಿದ್ದಾರೆ.

ಸಂಘರ್ಷದ ಹಾದಿ ತುಳಿದಿದ್ದಾರೆ ಎಂದು ದೂರಿದ್ದಾರೆ.

ಮೈಸೂರ್ ಸ್ಯಾಂಡಲ್ ಸೋಪ್‌ಗೆ ರಾಯಭಾರಿಯಾಗಿ ನಟಿ ತಮನ್ನಾ ಭಾಟಿಯಾ ನೇಮಕ ಮಾಡುವ ಮುಖಾಂತರ ರಾಜ್ಯ ಸರ್ಕಾರ ಕನ್ನಡಿಗರನ್ನು ಅವಮಾನಿಸಿದೆ. ನಟಿಯ ನೇಮಕದಿಂದ ಮೈಸೂರು ರಾಜಮನೆತನಕ್ಕೂ ಅಪಮಾನ ಮಾಡಿದಂತಾಗಿದೆ ಎಂದು ತಿಳಿಸಿದ್ದಾರೆ.

ರಾಮನಗರ ಜಿಲ್ಲೆಯ ಹೆಸರು ಬದಲಾವಣೆ ಮಾಡುವ ಮುಖಾಂತರ ರಾಮನಗರ ಜನತೆಗೆ ಅಪಮಾನ ಮಾಡಿದೆ. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ರವರು ರಿಯಲ್ ಎಸ್ಟೇಟ್ ಒತ್ತಡಕ್ಕೆ ಒಳಗಾಗಿ ಹೆಸರು ಬದಲಾವಣೆ ಮಾಡಲು ಮುಂದಾಗಿದ್ದಾರೆ ಎಂದು ಆರೋಪಿಸಿದ್ದಾರೆ.

<><><>

ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಕರಾವಳಿಗೆ ಈ ಬಾರಿ ವಾಡಿಕೆಗಿಂತ ಮುನ್ನವೇ ಮುಂಗಾರು ಪ್ರವೇಶವಾಗಿದೆ. ಇಂದು ಬೆಳಗ್ಗಿನಿಂದಲೇ ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುತ್ತಿದೆ.

ಮಳೆಯ ಜೊತೆಗೆ ಭಾರೀ ಗಾಳಿಯ ಪರಿಣಾಮವಾಗಿ ಹಲವೆಡೆ ಮರಗಳು ಧರೆಗುರುಳಿವೆ. ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿ ವಿದ್ಯುತ್ ತಂತಿಯ ಮೇಲೆ ಮರವೊಂದು ಉರುಳಿ ಬಿದ್ದ ಪರಿಣಾಮ ನಿನ್ನೆಯಿಂದ ವಿದ್ಯುತ್ ಸ್ಥಗಿತಗೊಳಿಸಲಾಗಿದೆ.

ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಜಿಲ್ಲೆಯ ಜೀವನದಿಗಳು ತುಂಬಿಕೊಂಡಿವೆ. ನೇತ್ರಾವತಿ, ಕುಮಾರಧಾರಾ, ಫಲ್ಗುಣಿ ನದಿಗಳು ತುಂಬಿದ್ದು, ನಗರದ ನೀರಿನ ಸಮಸ್ಯೆಯೂ ಬಗೆಹರಿದಿದೆ.

<><><>

ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದಲ್ಲಿ ಕಳೆದ ೩ ದಿನಗಳಿಂದ ನಿರಂತರ ಮಳೆಯಾಗುತ್ತಿದೆ.

ಜಿಲ್ಲೆಯ ಕಳಸ, ಹೊರನಾಡು, ಕೊಪ್ಪ, ಶೃಂಗೇರಿ, ಬಾಳೆಹೊನ್ನೂರು, ಮುಳ್ಳಯ್ಯನಗಿರಿ ಶ್ರೇಣಿಯಲ್ಲಿ ಭಾಗದಲ್ಲಿ ಹೆಚ್ಚಿನ ಮಳೆಯಾಗುತ್ತಿದ್ದು ತುಂಗಾ, ಹೇಮಾವತಿ, ಭದ್ರಾ ನದಿ ನೀರಿನ ಒಳಹರಿವು ಹೆಚ್ಚಾಗಿದೆ. ಕೊಟ್ಟಿಗೆಹಾರ, ಚಾರ್ಮಾಡಿ ಸುತ್ತ ಮುತ್ತ ಅತೀ ಹೆಚ್ಚು ಮಳೆಯಾಗುತಿದೆ, ಮಳೆಯಿಂದ ರಸ್ತೆ ಕಾಣದೆ ಹೇಮಾವತಿ ಉಪ ನದಿಗೆ ಕಾರೊಂದು ಉರುಳಿ ಬಿದ್ದಿದ್ದು ಸ್ಥಳೀಯರು ಕಾರಿನಲ್ಲಿದವರನ್ನು ರಕ್ಷಿಸಿದ್ದಾರೆ. ಹಲವು ಗ್ರಾಮಗಳಲ್ಲಿ ವಿದ್ಯುತ್ ಸಮಸ್ಯೆ ಉಂಟಾಗಿದೆ.

<><><>

ಜಲಾನಯನ ಪ್ರದೇಶದಲ್ಲಿ ರಾತ್ರಿಯಿಡೀ ಸುರಿದ ಮಳೆಗೆ ತುಂಗಾ ನದಿಗೆ ಕಟ್ಟಲಾದ ಗಾಜನೂರು ಜಲಾಶಯ ಭರ್ತಿಯಾಗಿದೆ. ಯಾವಕ್ಷಣದಲ್ಲಾದರೂ ಜಲಾಶಯದ ನೀರು ನದಿಗೆ ಹರಿಸುವುದಾಗಿ ತಿಳಿಸಿದ್ದ ನೀರಾವರಿ ಇಲಾಖೆ, ಈಗ ಪವರ್ ಹೌಸ್ ಮೂಲಕ ನದಿಗೆ ನೀರು ಹರಿಸಲು ನಿರ್ಧರಿಸಿದೆ. ಜಲಾಶಯ ಮುಂಗಾರು ಪೂರ್ವದಲ್ಲಿಯೇ ಭರ್ತಿಯಾಗಿದ್ದು, ೩.೭೧ ಟಿಎಂಸಿ ನೀರಿನ ಸಾಮರ್ಥ್ಯದ ಜಲಾಶಯಕ್ಕೆ ೨೦೦೦ ಕ್ಯೂಸೆಕ್ಸ್ ನೀರು ಹರಿದು ಬರುತ್ತಿದ್ದು, ಮಧ್ಯಾಹ್ನದ ವೇಳೆಗೆ ೮೦೦ ಕ್ಯೂಸೆಕ್ಸ್ ನೀರನ್ನೂ ಪವರ್ ಹೌಸ್ ನಿಂದ ಹರಿಬಿಡಲಾಗುತ್ತದೆ. ಒಳಹರಿವು ಹೆಚ್ಚಾದಲ್ಲಿ ಜಲಾಶಯದ ಮುಖ್ಯ ಗೇಟ್‌ಗಳನ್ನ ತೆರೆದು ಜಲಾಶಯದಿಂದ ನದಿಗೆ ನೀರು ಹರಿಸಲಾಗುವುದು. ಆದರೆ ಭದ್ರಾ ನದಿಗೆ ಒಳಹರಿವು ಇನ್ನೂ ಸಣ್ಣ ಪ್ರಮಾಣದಲ್ಲಿದೆ. ೧೮೬ ಅಡಿ ಸಾಮರ್ಥ್ಯದ ಭದ್ರಾ ಜಲಾಶಯದಲ್ಲಿ ೧೩೬ ಅಡಿ ನೀರು ಸಂಗ್ರಹವಾಗಿದೆ.

<><><><>

ರಾಜ್ಯದ್ಯಾಂತ ಇಂದಿನಿಂದ ಮಳೆ ಚುರುಕುಗೊಂಡಿದ್ದು ಕರಾವಳಿ ಸೇರಿ ೬ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ದೊರೆತಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಬೆಳಗಾವಿ, ಧಾರವಾಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್, ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಹಾವೇರಿ, ಗದಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ವಿಜಯನಗರ, ಯಾದಗಿರಿ, ರಾಯಚೂರು, ಕೊಪ್ಪಳ, ಬೀದರ್‌ನಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><><>

ರಾಜ್ಯ ಪ್ರವಾಸೋದ್ಯಮ ಇಲಾಖೆ ಇಂದಿನಿಂದ ವಿಧಾನಸೌಧ ಪ್ರವಾಸವನ್ನು ಆರಂಭಿಸುತ್ತಿದೆ. ಸಾರ್ವಜನಿಕರಿಗೆ ವಿಧಾನಸೌಧ ವೀಕ್ಷಣೆಗೆ ಅಧಿಕೃತವಾಗಿ ಅವಕಾಶ ಕಲ್ಪಿಸಲಾಗುತ್ತಿದೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್, ಅಧಿವೇಶನ ನಡೆಯುವ ಸಭಾಂಗಣ, ಬಸವೇಶ್ವರ ಪ್ರತಿಮೆ, ನಾಡಪ್ರಭು ಕೆಂಪೇಗೌಡ ಪ್ರತಿಮೆ, ಭುವನೇಶ್ವರಿ ದೇವಿ ಪ್ರತಿಮೆ, ವಿಧಾನಸೌಧದ ಪೂರ್ವದ್ವಾರದ ಐತಿಹಾಸಿಕ ಮೆಟ್ಟಿಲುಗಳು, ವಿಧಾನಸೌಧದ ಅಡಿಗಲ್ಲು, ಕೆಂಗಲ್ ಹನುಮಂತಯ್ಯ ಪ್ರತಿಮೆ ವೀಕ್ಷಿಸಲು ಸಾರ್ವಜನಿಕರಿಗೆ ಅನುವು ಮಾಡಿಕೊಡಲಾಗಿದೆ. ವಿಧಾನಸೌಧ ವೀಕ್ಷಿಸಲು ಪ್ರತಿ ಪ್ರವಾಸಿಗರಿಗೆ ಆರಂಭಿಕ ೫೦ ರೂಪಾಯಿ ಪ್ರವೇಶ ಶುಲ್ಕ ನಿಗದಿ ಮಾಡಲಾಗಿದೆ.

<><><><>

ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ನಾಳೆಯಿಂದ ಮೇ ೧೯ ರವರೆಗೆ ಮಂಡ್ಯ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದು, ಈ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಡಾ. ಕುಮಾರ ಮಂಡ್ಯ ನಗರದ ಡಾ. ಬಿ.ಆರ್.ಅಂಬೇಡ್ಕರ್ ಭವನಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಉಪ ಲೋಕಾಯುಕ್ತರು ಮೇ ೧೬ ರಂದು ಸಂಜೆ ೬.೩೦ ಕ್ಕೆ ಮಂಡ್ಯ ಜಿಲ್ಲೆಗೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ. ಮೇ ೧೭ ರಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ ಎಂದರು.

<><><><>